# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 616 |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ |
| ಉತ್ತರಿಸುವ ದಿನಾಂಕ | 12.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಶುದ್ಧ ಕುಡಿಯುವ ನೀರು ಹಾಗೂ ಇತರೆ ಮೂಲಭೂತ ಸೌಕರ್ಯಗಳ ಕೊರತೆ ಇರುವುದರಿಂದ ಭಕ್ತರಿಗೆ ಅನಾನುಕೂಲ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಲಬುರಗಿ ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶೌಚಾಲಯದ ವ್ಯವಸ್ಥೆ ಮತ್ತು ಊಟದ ವ್ಯವಸ್ಥೆಗಳನ್ನು ಈಗಾಗಲೇ ಕಲ್ಪಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಪ್ರಸ್ತುತ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ; (ಸಂಪೂರ್ಣ ವಿವರ ನೀಡುವುದು) | ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೆ ಒಳಪಡುವ ಅಧಿಸೂಚಿತ ಸಂಸ್ಥೆಗಳಿಗೆ ಬರುವ ಭಕ್ತಾದಿಗಳಿಗೆ/ ಸಾರ್ವಜನಿಕರಿಗೆ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿರುತ್ತದೆ.<br><br>ದೇವಾಲಯಕ್ಕೆ ಭೇಟಿ ನೀಡುವ ಭಕ್ತಾದಿಗಳಿಗೆ ಮಾರ್ಗದರ್ಶನ ನೀಡುವ ನಾಮಫಲಕಗಳನ್ನು ಅಳವಡಿಸಲಾಗಿರುತ್ತದೆ.<br><br>ದೇವಾಲಯಕ್ಕೆ ಭೇಟಿ ನೀಡುವ ಹಿರಿಯ ನಾಗರೀಕರಿಗೆ ಪ್ರತ್ಯೇಕ ಸರದಿ ಸಾಲಿನಲ್ಲಿ ದರ್ಶನದ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ.<br><br>ಭಕ್ತಾದಿಗಳಿಗೆ ನೆರಳಿನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. ಮತ್ತು ಸೂಕ್ತ ಬೆಳಕಿನ ವ್ಯವಸ್ಥೆಗಾಗಿ ಹೈಮಾಸ್ಕ್ ಲ್ಯಾಂಪ್‌ಗಳನ್ನು ಅಳವಡಿಸಲಾಗಿದೆ.<br><br>ದೇವಾಲಯಕ್ಕೆ ಬರುವ ಭಕ್ತಾದಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ಸಲುವಾಗಿ (RO Plant) ಗಳನ್ನು ಅಳವಡಿಸಲಾಗಿರುತ್ತದೆ.<br><br>ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನ್ನ ದಾಸೋಹ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.<br><br>ದೇವಾಲಯಕ್ಕೆ ಬರುವ ಭಕ್ತಾದಿಗಳಿಗೆ ಶೌಚಾಲಯಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ದೇವಾಲಯದ ಭದ್ರತಾ ದೃಷ್ಟಿಯಿಂದ CC TV ಗಳನ್ನು ಅಳವಡಿಸಲಾಗಿರುತ್ತದೆ.<br><br>ಪ್ರವರ್ಗ 'ಎ' ಮತ್ತು 'ಬಿ' ದೇವಾಲಯಗಳಲ್ಲಿ ತಾಯಂದಿರು ಹಾಲುಣಿಸಲು ಪ್ರತ್ಯೇಕ ಕೊಠಡಿ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. |
| ಇ) | ವಿಶೇಷ ದಿನಗಳಲ್ಲಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಉತ್ತಮ ಗುಣಮಟ್ಟದ ದಾಸೋಹ ನಿರ್ವಹಣೆ ಮಾಡಲಾಗುತ್ತಿದೆಯೇ; ದಾಸೋಹ ಕಟ್ಟಡದ ಸ್ಥಿತಿಗತಿ ನಿರ್ವಹಣೆ ಇಲ್ಲದೇ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತಂತೆ ಕೈಗೊಂಡಿರುವ ಕ್ರಮವೇನು; (ಸಂಪೂರ್ಣ ವಿವರ ಒದಗಿಸುವುದು) | ದೇವಾಲಯಕ್ಕೆ ಆಗಮಿಸುವ ಭಕ್ತಾದಿಗಳಿಗೆ ಉತ್ತಮ ಗುಣಮಟ್ಟದ ದಾಸೋಹದ ಕಟ್ಟಡ ವ್ಯವಸ್ಥೆ ಇದ್ದು, ಪ್ರತೀ ದಿನ ಭಕ್ತಾದಿಗಳಿಗೆ ಅನ್ನ ಪ್ರಸಾದದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.<br><br>ದೇವಾಲಯಕ್ಕೆ ಆಗಮಿಸುವ ಭಕ್ತಾದಿಗಳಿಗೆ ದಾಸೋಹ ವ್ಯವಸ್ಥೆ ಇದ್ದು, ಉತ್ತಮ ಗುಣಮಟ್ಟದ ಅನ್ನ ಪ್ರಸಾದವನ್ನು ಪ್ರತಿ ದಿನ ಒದಗಿಸಲಾಗುತ್ತಿದೆ. |
| ಈ) | ದೇವಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಕಾಲದಲ್ಲಿ ವೇತನ ಪಾವತಿಸಲಾಗುತ್ತಿದೆಯೇ; (ವಿವರ ಒದಗಿಸುವುದು) | ದೇವಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ವೇತನವನ್ನು ಪಾವತಿಸಲಾಗುತ್ತಿದೆ. |
| ಉ) | ಪಾವತಿಸದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಪಾವತಿಸಲಾಗುವುದು; | |
| ಊ) | ಭಕ್ತರು ದೇವಸ್ಥಾನಕ್ಕೆ ನೀಡಲಾಗುತ್ತಿರುವ ಅಕ್ಕಿ, ದವಸ ಹಾಗೂ ಇತರೆ ಧಾನ್ಯಗಳನ್ನು ಸಮರ್ಪಕವಾಗಿ ಸಂಗ್ರಹಿಸಿ ಬಳಸಲಾಗುತ್ತಿದೆಯೇ? (ಸಂಪೂರ್ಣ ವಿವರ ನೀಡುವುದು) | ಭಕ್ತರು ದೇವಸ್ಥಾನಕ್ಕೆ ನೀಡಲಾಗುತ್ತಿರುವ ಅಕ್ಕಿ, ದವಸ ಹಾಗೂ ಇತರೆ ಧಾನ್ಯಗಳನ್ನು ಸಮರ್ಪಕವಾಗಿ ಸಂಗ್ರಹಿಸಿ ಬಳಸಲಾಗುತ್ತಿದೆ. |

ಸಂಖ್ಯೆ: ಕಂಇ 50 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು